ಆ) ಗ್ರಾಮ ಪಂಚಾಯತಿ ಕಟ್ಟಡದಲ್ಲಿ/ಕಟ್ಟಡ ಲಭ್ಯವಿಲ್ಲದ ಗ್ರಾಮ ಪಂಚಾಯತಿಗಳಲ್ಲಿ ಸಾರ್ವಜನಿಕ ಸ್ಥಳದಲ್ಲಿ ಶಾಮಿಯಾನ/ಪೆಂಡಾಲ್ ನಿರ್ಮಿಸಿ ಗ್ರಾಮ ಸಭೆಗಳನ್ನು ನಡೆಸಲಾಗುತ್ತದೆ.

ಇ) ಗ್ರಾಮ ಸಭೆಗಳನ್ನು ವ್ಯವಸ್ಥಿತವಾಗಿ ನಡೆಸಲು ಅವಕಾಶ ಮಾಡಲಾಗುವುದು.

**ಗ್ರಾಮ ಪಂಚಾಯತ್ ಬಜೆಟ್**

**2443(3285); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)**

ಅ) ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅನೇಕ ಯೋಜನೆಗಳಿಗೆ ವೆಚ್ಚ ಮಾಡುತ್ತಿರುವ ಬಜೆಟ್ ಹಣ ಹಾಗೂ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಎಲ್ಲಾ ವಿವರಗಳನ್ನು ಗ್ರಾಮಸಭೆಗಳಲ್ಲಿ ಇಡದಿರುವುದು ಹಾಗೂ ಗ್ರಾಮ ಪಂಚಾಯತಿ ಸದಸ್ಯರಿಗೆ ಮಾಹಿತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು?

**ಶ್ರೀ ಎಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

ಅ) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 3(ಎ)ರನ್ವಯ ವರ್ಷಕ್ಕೆ 2 ಬಾರಿ ನಡೆಸುವ ಗ್ರಾಮ ಸಭೆಗಳಲ್ಲಿ ಗ್ರಾಮ ಪಂಚಾಯತಿಯ ಎಲ್ಲಾ ಯೋಜನೆಗಳ (ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹೊರತುಪಡಿಸಿ) ಅನುದಾನದ ವಿವರ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ವಿವರಗಳನ್ನು ಸಾರ್ವಜನಿಕರ ಅವಗಾಹನೆಗೆ ಮಂಡಿಸಲಾಗುತ್ತಿದೆ. ಗ್ರಾಮ ಪಂಚಾಯತಿಯ ಎಲ್ಲಾ ಖರ್ಚು ವೆಚ್ಚಗಳು, ಯೋಜನೆಗಳು, ಸರ್ಕಾರದಿಂದ ಬಿಡುಗಡೆಯಾಗುವ ಅನುದಾನ ಈ ಎಲ್ಲಾ ಮಾಹಿತಿಗಳನ್ನು ಗ್ರಾಮ ಪಂಚಾಯತಿಯ ಪ್ರತಿ ತಿಂಗಳ ಸಾಮಾನ್ಯ ಸಭೆಯಲ್ಲಿ ಮಂಡಿಸಲಾಗುತ್ತಿದೆ. ಈ ರೀತಿ ಸಾಮಾನ್ಯ ಸಭೆಗೆ ಮಂಡಿಸುವುದರಿಂದ ಸಭೆಯಲ್ಲಿ ಹಾಜರಿರುವ ಸದಸ್ಯರುಗಳ ಗಮನಕ್ಕೆ ಬಂದಿರುತ್ತದೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಸರ್ಕಾರದ ನಿರ್ದೇಶನದಂತೆ ಪ್ರತಿಯೊಂದು ವಾರ್ಡ್‌ನಲ್ಲಿ ಆ ಭಾಗದ ಗ್ರಾಮ ಪಂಚಾಯತಿ ಸದಸ್ಯರ ಅಧ್ಯಕ್ಷತೆಯಲ್ಲಿ ವಾರ್ಡ್ ಸಭೆ ಹಾಗೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಾಮ ಸಭೆ ಪ್ರತಿ ವರ್ಷ ನಡೆಸಲಾಗುತ್ತಿದೆ. ಇದಲ್ಲದೆ ವರ್ಷಕ್ಕೆ 2 ಬಾರಿ ಸಾಮಾಜಿಕ ಲೆಕ್ಕ ತಪಾಸಣೆ ಗ್ರಾಮ ಸಭೆಯನ್ನು ನಡೆಸಲಾಗುತ್ತಿದೆ. ಗ್ರಾಮ ಪಂಚಾಯತಿಗಳ ಖರ್ಚು ವೆಚ್ಚಗಳನ್ನು ಹಾಗೂ ಇತರೆ ಮಾಹಿತಿಯನ್ನು ತಿಳಿದುಕೊಳ್ಳಲು ಪ್ರತಿಯೊಬ್ಬ ಗ್ರಾಮ ಪಂಚಾಯತಿಯ ಚುನಾಯಿತ ಸದಸ್ಯರುಗಳಿಗೆ ಅವಕಾಶ ಕಲ್ಪಿಸಲಾಗಿದೆ.

ಆ) ಮೇಲಿನ "ಅ" ಪ್ರಶ್ನೆಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

## ರಸ್ತೆಗಳ ಅಭಿವೃದ್ಧಿ

**2444(2813); ಶ್ರೀ ಬೋಪಯ್ಯ ಕೆ.ಜೆ. (ವಿರಾಜಪೇಟೆ)**

ಅ) 2013–14 ಹಾಗೂ 2014–15ನೇ ಸಾಲುಗಳಲ್ಲಿ ಪ್ರತ್ಯೇಕ ಮುಂಗಡ ಪತ್ರಗಳಲ್ಲಿ ಕೊಡಗು ಜಿಲ್ಲೆಯ ರಸ್ತೆಗಳ ಅಭಿವೃದ್ಧಿಗಾಗಿ ಘೋಷಣೆಯಾದ ತಲಾ ರೂ. 50.00 ಕೋಟಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಮಂಜೂರಾದ ಮೊತ್ತವೆಷ್ಟು;

ಆ) ಸದರಿ ಮೊತ್ತದಲ್ಲಿ ಎಷ್ಟು ಕಾಮಗಾರಿಗಳನ್ನು ಗುರುತಿಸಲಾಗಿದೆ; ತಾಲ್ಲೂಕುವಾರು ಕಾಮಗಾರಿಗಳ ವಿವರಗಳನ್ನು ನೀಡುವುದು;

ಇ) ಇವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು (ವಿವರಗಳನ್ನು ಒದಗಿಸುವುದು);